ಅ) ಇಲ್ಲ

ಆ) ನೀಡುತ್ತಿರುವುದಾಗಿ ತಿಳಿಸಿಲ್ಲ

ಇ) ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತಿ ಸದಸ್ಯರಿಗೆ ಗೌರವಧನ ನೀಡುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ರಾಜ್ಯದಲ್ಲಿ ಕಂಪ್ಯೂಟರ್ ಶಿಕ್ಷಣ

2210 - ಶ್ರೀ ಎಸ್. ಸುರೇಶ್ ಕುಮಾರ್ (ರಾಜಾಜಿನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಂಪ್ಯೂಟರ್ ಶಿಕ್ಷಣಕ್ಕೆ ಶಿಕ್ಷಣ ಮಂಡಳಿಯನ್ನು ರಚಿಸಲು ಸರ್ಕಾರ ಯೋಚಿಸಿದೆಯೇ?

ಆ) ಹಾಗಿದ್ದಲ್ಲಿ, ಈ ಮಂಡಳಿಗೆ ಬೇಕಾದ ರೂಪುರೇಷೆಗಳನ್ನು ತಯಾರಿಸಲಾಗಿದೆಯೇ?

ಇ) ಹಾಗೂ ಇದಕ್ಕೆ ಸಂಬಂಧಿಸಿದಂತೆ ಸಮಿತಿಯನ್ನೇನಾದರೂ ರಚಿಸಿದೆಯೇ? ಹಾಗಿದ್ದಲ್ಲಿ ಸದರಿ ಸಮಿತಿ ಸರ್ಕಾರಕ್ಕೆ ತನ್ನ ವರದಿಯನ್ನು ಸಲ್ಲಿಸಿದೆಯೇ?

ಈ) ಈ ಕಂಪ್ಯೂಟರ್ ಶಿಕ್ಷಣ ಮಂಡಳಿ ಯಾವಾಗಿನಿಂದ ಕಾರ್ಯಾರಂಭ ಮಾಡುವುದು?

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ದಿನಾಂಕ : 19-3-97, ಸಂ:ಇಡಿ 45 ಯುಆರ್‌ಸಿ 97 ರ ಸರ್ಕಾರಿ ಆದೇಶದಲ್ಲಿ ಖಾಸಗೀ ಕಂಪ್ಯೂಟರ್ ಶಿಕ್ಷಣ ಸಂಸ್ಥೆ ಪ್ರತಿಬಂಧಕ್ಕಾಗಿ ಒಂದು ಸಮಿತಿಯನ್ನು ರಚಿಸಲಾಗಿದೆ. ಅದರ ವರದಿಯನ್ನು ನಿರೀಕ್ಷಿಸಲಾಗುತ್ತಿದೆ.

ಈ) ಅನ್ವಯಿಸುವುದಿಲ್ಲ.

ಶಾಲಾಭಿವೃದ್ಧಿ ಸಮಿತಿಗಳಿಗೆ ಅಧಿಕಾರ

2211 - ಶ್ರೀ ಡಿ.ವಿ. ಸದಾನಂದಗೌಡ (ಪುತ್ತೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರದ ಸುತ್ತೋಲೆಯಂತೆ ಶಾಲಾಭಿವೃದ್ಧಿ ಸಮಿತಿಗಳ ಅಧಿಕಾರ ವ್ಯಾಪ್ತಿಯೇನು?